# All India Radio: Bangalore
# Regional Bulletin In Kannada
# 06.03.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 06.03.2025 / 2.30 p.m.

***************

**ಮುಖ್ಯಾಂಶಗಳು**

- **ಕಾರವಾರದಲ್ಲಿ 450 ಹಾಸಿಗೆಗಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಶೀಘ್ರ ಲೋಕಾರ್ಪಣೆ – ಸಚಿವ ಡಾ. ಶರಣ್‌ಪ್ರಕಾಶ್ ಪಾಟೀಲ್**
- **ರಾಜ್ಯಾದ್ಯಂತ ಚಿತ್ರಮಂದಿರಗಳಿಗೆ ಶೀಘ್ರ ಏಕರೂಪದ ಟಿಕೆಟ್ ದರ ನಿಗದಿ – ಗೃಹ ಸಚಿವ ಡಾ. ಜಿ.ಪರಮೇಶ್ವರ್**
- **ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ನಾಳೆ ರಾಜ್ಯ ಬಜೆಟ್ ಮಂಡನೆ**
- **ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ಆರೋಪ: ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ**

***************

ಉತ್ತರ ಕನ್ನಡ ಜಿಲ್ಲೆ ಕಾರವಾರದಲ್ಲಿ 450 ಹಾಸಿಗೆಗಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಮುಂದಿನ ಎರಡು ತಿಂಗಳಲ್ಲಿ ಲೋಕಾರ್ಪಣೆ ಮಾಡಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ವಿಧಾನಸಭೆಯಲ್ಲಿಂದು ತಿಳಿಸಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ದಿನಕರ್ ಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕಾರವಾರದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಪ್ರತ್ಯೇಕ ಕ್ಯಾನ್ಸರ್ ಘಟಕವನ್ನು ಸ್ಥಾಪಿಸಲು ತಜ್ಞ ವೈದ್ಯಕೀಯ ಸಿಬ್ಬಂದಿಯನ್ನು ನೇಮಿಸಿಕೊಳ್ಳಲಾಗುತ್ತಿದೆ. ಪ್ರತಿಯೊಂದು ಜಿಲ್ಲೆಯಲ್ಲೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪಿಸುವ ಉದ್ದೇಶವಿದೆ. ಕಂದಾಯ ವಿಭಾಗಗಳಾದ ಬೆಳಗಾವಿ, ಕಲಬುರ್ಗಿ, ಮೈಸೂರಿನಲ್ಲಿಯೂ ಇಂತಹ ಅತ್ಯಾಧುನಿಕ ವೈದ್ಯಕೀಯ ಸೌಲಭ್ಯ ಕಲ್ಪಿಸಲಾಗುವುದು ಎಂದು ಮಾಹಿತಿ ನೀಡಿದರು.

ಕುಮಟಾದಲ್ಲಿ ಸೂಪರ್ ಸ್ಪಷಾಲಿಟಿ ಆಸ್ಪತ್ರೆ ಸ್ಥಾಪನೆ ಪರಿಶೀಲನೆಯಲ್ಲಿದೆ. ಆದರೆ ಜಿಲ್ಲಾ ಕೇಂದ್ರದ ಹೊರ ಭಾಗದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪಿಸುವುದು ಕಷ್ಟವಾಗಲಿದೆ. ಆದರೂ ಉತ್ತರ ಕನ್ನಡ ಜಿಲ್ಲೆಯ ಜನಪ್ರತಿನಿಧಿಗಳ ಸಭೆ ಕರೆದು ಚರ್ಚೆ ನಡೆಸಲಾಗುವುದು ಎಂದು ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಹೇಳಿದರು.

***************

ಬೇಸಿಗೆ ಸಮಯದಲ್ಲಿ ಅಗತ್ಯಕ್ಕೆ ತಕ್ಕಂತೆ ವಿದ್ಯುತ್ ಪೂರೈಸುತ್ತಿದ್ದು, ರಾಜ್ಯದಲ್ಲಿ ವಿದ್ಯುತ್ ಮಾರ್ಗವನ್ನು ಮತ್ತಷ್ಟು ಸದೃಢಗೊಳಿಸಲು ವಿದ್ಯುತ್ ಉಪ ಕೇಂದ್ರಗಳ ಸ್ಥಾಪನೆಗೆ ಒತ್ತು ನೀಡಲಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ವಿಧಾನಸಭೆಯಲ್ಲಿಂದು ಹೇಳಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ಸಿದ್ದು ಸವದಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಈ ವರ್ಷ 56 ಉಪ ಕೇಂದ್ರಗಳು ಮತ್ತು ಮುಂದಿನ ವರ್ಷ 100 ಕಡೆಗಳಲ್ಲಿ ಉಪ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಒಟ್ಟಾರೆ ಎರಡು ವರ್ಷಗಳಲ್ಲಿ ಉಪ ಕೇಂದ್ರಗಳನ್ನು ಬದಲಾವಣೆ ಮಾಡಲಾಗುವುದು. ಕುಸುಮ್ ಯೋಜನೆಯಡಿ ರಾಜ್ಯದಲ್ಲಿ 3 ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಉನ್ನತ ಶಿಕ್ಷಣ ಸಚಿವ ಡಾ.ಸುಧಾಕರ್ ಮಾತನಾಡಿ, ಕಳೆದ ಏಳೆಂಟು ವರ್ಷಗಳಿಂದ ಕಾಲೇಜು ಕಟ್ಟಡಗಳ ದುರಸ್ತಿ ಮಾಡಿಲ್ಲ. ಹೀಗಾಗಿ ದುರಸ್ತಿಗಾಗಿ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗಿದೆ. ನಾಳೆ ಆಯವ್ಯಯದಲ್ಲಿ ಈ ಸಂಬಂಧ ವಿಶೇಷ ನೆರವು ಪ್ರಕಟವಾಗುವ ವಿಶ್ವಾಸವಿದೆ ಎಂದು ಹೇಳಿದರು.

***************

ರಾಜ್ಯಾದ್ಯಾಂತ ಚಿತ್ರಮಂದಿರಗಳಿಗೆ ಏಕರೂಪದ ಟಿಕೆಟ್ ದರವನ್ನು ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಜಾರಿಗೆ ಮಾಡಲಿದ್ದೇವೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ.

ವಿಧಾನ ಪರಿಷತ್‌ನಲ್ಲಿಂದು ಸದಸ್ಯ ಗೋವಿಂದ್ ರಾಜ್ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಚಿತ್ರಮಂದಿರಗಳಿಗೆ ಟಿಕೆಟ್ ದರವನ್ನು ಚಿತ್ರಮಂದಿರಗಳ ಮಾಲೀಕರೇ ನಿರ್ಧಾರ ಮಾಡುವ ಪದ್ಧತಿ ಇದೆ. ಅವಶ್ಯಕ ಎನಿಸಿದಾಗ ದರ ನಿಗದಿ ಮಾಡುವ ಅಧಿಕಾರ ಸರ್ಕಾರಕ್ಕೆ ಇದೆ. ಮುಂದಿನ ದಿನಗಳಲ್ಲಿ ಏಕರೂಪದ ಟಿಕೆಟ್ ದರವನ್ನು ನಿಗದಿಪಡಿಸುವ ಸಂಬಂಧ, ಸಂಬಂಧಪಟ್ಟವರ ಜೊತೆ ಚರ್ಚೆ ಮಾಡಲಾಗುವುದು ಎಂದರು.

ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳು ಬಹು ಪರದೆಗಳನ್ನು ಹೊಂದಿವೆ. ಇದರಿಂದ ಕನ್ನಡ ಭಾಷಾ ಚಿತ್ರಗಳಿಗೆ ಯಾವುದೇ ತೊಂದರೆ ಇಲ್ಲ. ಆದರೆ ಕನ್ನಡ ಚಿತ್ರಗಳಿಗೆ ಚಿತ್ರಮಂದಿರಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. ಅನ್ಯ ಭಾಷೆ ಸಿನಿಮಾಗಳಿಗೆ ಮಾತ್ರ ಟಿಕೆಟ್ ದರ ಹೆಚ್ಚಳ ಮಾಡುತ್ತಿರುವ ಬಗ್ಗೆ ದೂರು ಬಂದಿಲ್ಲ ಎಂದು ಡಾ. ಜಿ.ಪರಮೇಶ್ವರ್ ಪುನರುಚ್ಚರಿಸಿದರು.

***************

ಕಲಬುರಗಿ ಜಿಲ್ಲೆಯ ಸೇಡಂ ತಾಲೂಕಿನ ಯಾನಾಗುಂದಿಯಲ್ಲಿರುವ ಮಾಣಿಕ್ಯಶ್ವೇರಿ ದೇವಸ್ಥಾನವನ್ನು ಪ್ರವಾಸಿ ತಾಣವನ್ನಾಗಿ ಮಾಡಲು ಆರ್ಥಿಕ ನೆರವು ನೀಡಲು ಸರ್ಕಾರ ನಿರ್ಧರಿಸಿದೆ ಎಂದು ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ವಿಧಾನ ಪರಿಷತ್‌ನಲ್ಲಿಂದು ಸದಸ್ಯ ತಿಪ್ಪಣ್ಣ ಕಮಕನೂರು ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಯಾನಾಗುಂದಿಯಲ್ಲಿರುವ ಮಾಣಿಕ್ಯಶ್ವೇರಿ ದೇವಸ್ಥಾನಕ್ಕೆ ಪ್ರತಿದಿನ ದೇಶ-ವಿದೇಶಗಳಿಂದ ಸಾವಿರಾರು ಭಕ್ತರು ಆಗಮಿಸುತ್ತಾರೆ. ಇವರಿಗೆ ಕನಿಷ್ಠ ಮೂಲಸೌಕರ್ಯಗಳನ್ನು ಕಲ್ಪಿಸಿಕೊಡಬೇಕು ಎಂಬ ಬೇಡಿಕೆ ಬಹಳ ದಿನಗಳಿಂದಲೂ ಇದೆ. ಇಲಾಖೆಯ ಅಧಿಕಾರಿಗಳ ಜೊತೆ ಚರ್ಚಿಸಿ, ಸೂಕ್ತ ಹಣಕಾಸಿನ ನೆರವು ನೀಡಲಾಗುವುದು.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ 2025–26ನೇ ಸಾಲಿನ ಬಜೆಟ್ ಮಂಡಿಸಲಿದ್ದಾರೆ. ಇದು ಅವರು ಮಂಡಿಸುತ್ತಿರುವ 16ನೇ ಆಯವ್ಯಯವಾಗಿದೆ.

ನಾಳೆ ಬೆಳಗ್ಗೆ 10.15ಕ್ಕೆ ಬಜೆಟ್ ಮಂಡಿಸಲಿದ್ದು, ರಾಜ್ಯದ ಹಣಕಾಸು ಸಚಿವರಾಗಿ ಅತಿಹೆಚ್ಚು ಬಜೆಟ್ ಮಂಡಿಸಿದ ಕೀರ್ತಿಗೆ ಭಾಜನರಾಗಲಿದ್ದಾರೆ.

ಈ ಬಾರಿಯ ಬಜೆಟ್‌ನಲ್ಲಿ ಕೃಷಿ, ಆರೋಗ್ಯ, ಶಿಕ್ಷಣಕ್ಕೆ ಒತ್ತು ನೀಡಲಾಗುವುದು ಎಂದು ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಬಜೆಟ್ ಕುರಿತ ಸಂಪೂರ್ಣ ಮಾಹಿತಿ ನಾಳೆ ಮಧ್ಯಾಹ್ನ 2:30 ರ ಪ್ರದೇಶ ಸಮಾಚಾರ ಹಾಗೂ ಸಂಜೆ 6:40 ರ ಪ್ರದೇಶ ಸಮಾಚಾರದಲ್ಲಿ ಪ್ರಸಾರವಾಗಲಿದೆ. ನಾಳೆ ರಾತ್ರಿ 8ರಿಂದ 8–30ರ ವರೆಗೆ ಬಜೆಟ್ ಕುರಿತ ವಿಶೇಷ ಸಂವಾದವೂ ಮೂಡಿಬರಲಿದೆ.

***************

ವಿಧಾನಸಭೆ ಹಾಗೂ ವಿಧಾನಪರಿಷತ್ ಕಲಾಪಗಳ ಕುರಿತ ಸಮಗ್ರ ಚಿತ್ರಣ ವಿಧಾನಮಂಡಲದಲ್ಲಿ ಇಂದು ವಿಶೇಷ ಸಂಚಿಕೆಯಲ್ಲಿ 7.45 ರಿಂದ 8 ರವರೆಗೆ ಮೂಡಿ ಬರಲಿದೆ.

***************

ಅಕ್ರಮ ಆಸ್ತಿ ಗಳಿಕೆ ಹಿನ್ನೆಲೆಯಲ್ಲಿ ರಾಜ್ಯದ ವಿವಿಧೆಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬೆಂಗಳೂರು, ಕೋಲಾರ, ಕಲಬುರಗಿ, ದಾವಣಗೆರೆ, ತುಮಕೂರು, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ದಾಳಿ ನಡೆದಿದ್ದು, ಎಂಟು ಅಧಿಕಾರಿಗಳ ಮನೆಗಳು ಮತ್ತು ಆಸ್ತಿಗಳ ಪರಿಶೀಲನೆ ನಡೆಸಲಾಗಿದೆ ಎಂದು ಐಎಎನ್ ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

ದಾವಣಗೆರೆ ನಗರದಲ್ಲಿ, ನಿಜಲಿಂಗಪ್ಪ ಲೇಔಟ್‌ನಲ್ಲಿರುವ ಆಹಾರ ಸುರಕ್ಷತಾ ಅಧಿಕಾರಿಯ ಮನೆ ಮತ್ತು ಕಚೇರಿಯ ಮೇಲೆ ದಾಳಿ ನಡೆಸಲಾಗಿದೆ.

ಲೋಕಾಯುಕ್ತ ಎಸ್‌ಪಿ ಬಿ.ಕೆ. ಉಮೇಶ್ ನೇತೃತ್ವದಲ್ಲಿ ಕಲಬುರಗಿ ನಗರದಲ್ಲಿ, ಲೋಕೋಪಯೋಗಿ ಇಲಾಖೆಯ ಮುಖ್ಯ ಎಂಜಿನಿಯರ್ ನಿವಾಸ ಮತ್ತು ಆಸ್ತಿಗಳ ಮೇಲೆ ದಾಳಿ ನಡೆಸಲಾಗಿದ್ದು, ಕೋಟ್ಯಂತರ ಮೌಲ್ಯದ ಆಸ್ತಿಗಳ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ.

ಬೆಂಗಳೂರು ಮುಖ್ಯ ಯೋಜನಾಧಿಕಾರಿ ಯೋಜನಾ ಅನುಷ್ಠಾನ ಘಟಕ, ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಅಧಿಕಾರಿ ಜಗನ್ನಾಥ ಹಲಿಂಗೆ ಅವರಿಗೆ ಸೇರಿದ ಮನೆಗಳ ಮೇಲೆ ದಾಳಿ ನಡೆಸಲಾಗಿದೆ.

ಅವರ ಕಲಬುರಗಿ ನಗರದ ಎನ್.ಜಿ.ಒ. ಕಾಲೊನಿಯಲ್ಲಿರುವ ಮನೆ ಮೇಲೆ ದಾಳಿ ನಡೆಸಲಾಗಿದೆ. ಇನ್ನೊಂದೆಡೆ, ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲೂಕಿನ ಧನ್ನೂರ ಕೆ ಗ್ರಾಮದ ಫಾರ್ಮ್ ಹೌಸ್ ಮೇಲೆ ಹಾಗೂ ಬೆಂಗಳೂರಿನಲ್ಲಿರುವ ಮನೆ

ಮೇಲೂ ದಾಳಿ ನಡೆದಿದೆ. ಆದಾಯಕ್ಕಿಂತ ಹೆಚ್ಚು ಆಸ್ತಿ ಹೊಂದಿರುವ ಆರೋಪ ಹಿನ್ನೆಲೆಯಲ್ಲಿ ಚಿನ್ನಾಭರಣ, ನಗದು, ಮಹತ್ವದ ದಾಖಲೆ ಪತ್ರಗಳನ್ನು ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

***************

ಮೈಸೂರು ಆಕಾಶವಾಣಿ ಕೇಂದ್ರವು 90 ವಸಂತಗಳನ್ನು ಪೂರೈಸಿದೆ. ಇದರ ಅಂಗವಾಗಿ ನಾಳೆ ಬೆಳಗ್ಗೆ ನಗರದ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನ ಮುಂಭಾಗದಿಂದ ಆಕಾಶವಾಣಿ ಕಚೇರಿಯವರೆಗೆ ಸೈಕಲ್ ಜಾಥಾ ಏರ್ಪಡಿಸಲಾಗಿದೆ. ನವದೆಹಲಿಯ ಆಕಾಶವಾಣಿ ಸುದ್ದಿ ವಿಭಾಗದ ಮಹಾನಿರ್ದೇಶಕರಾದ ಡಾ. ಪ್ರಜ್ಞಾ ಪಾಲೀವಾಲ್ ಗೌರ್ ಜಾಥಾದಲ್ಲಿ ಭಾಗವಹಿಸಲಿದ್ದಾರೆ.

ಇದೇ ವೇಳೆ ಪ್ರಸಾರ ಭಾರತಿ ಸಹಕಾರದೊಂದಿಗೆ ನಾಳೆ ಮೈಸೂರಿನ ಆಕಾಶವಾಣಿ ಕೇಂದ್ರದ ಆವರಣದಲ್ಲಿ 'ನುಡಿ ನಾದ ಸಂಗಮ' ವಿಶೇಷ ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮದ ಕುರಿತು ಮೈಸೂರು ಆಕಾಶವಾಣಿಯ ಉಪನಿರ್ದೇಶಕರಾದ ಉಮೇಶ್ ಎಸ್.ಎಸ್. ಅವರು ಆಕಾಶವಾಣಿಯೊಂದಿಗೆ ಮಾತನಾಡಿದ್ದಾರೆ.

**ಧ್ವನಿ: ಉಮೇಶ್.ಎಸ್.ಎಸ್.**

***************

ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಇದೇ 8ರಂದು ಗಾಯನಾಚಾರ್ಯ ಗುರುರಾವ್ ದೇಶಪಾಂಡೆ ಸಂಗೀತ ಸಭಾ ವತಿಯಿಂದ ಗುರುರಾವ್ ದೇಶಪಾಂಡೆ–ಭೀಮಸೇನ್ ಜೋಶಿ ಸ್ಮರಣಾರ್ಥ ಅಹೋರಾತ್ರಿ ಸಂಗೀತೋತ್ಸವ ಆಯೋಜಿಸಲಾಗಿದೆ.

ಈ ಬಾರಿಯ ಸಂಗೀತೋತ್ಸವದ ವೇಳೆ ನಾಡಿನ ಖ್ಯಾತ ಹಿಂದೂಸ್ತಾನಿ ಗಾಯಕರಾದ ಪಂಡಿತ್ ವೆಂಕಟೇಶ್ ಕುಮಾರ್ ಅವರಿಗೆ ಗುರುಗಂಧರ್ವ ರಾಷ್ಟ್ರೀಯ ಪುರಸ್ಕಾರ ನೀಡಿ ಗೌರವಿಸಲಾಗುವುದು. ಇದೇ ವೇಳೆ ಇತ್ತೀಚೆಗೆ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಒಂದಾದ ಪದ್ಮವಿಭೂಷಣಕ್ಕೆ ಭಾಜನರಾದ ಡಾ. ಎಲ್ ಸುಬ್ರಮಣ್ಯಂ ಅವರನ್ನು ವಿಶೇಷ ಸನ್ಮಾನದ ಮೂಲಕ ಗೌರವಿಸಲಾಗುವುದು. ಕಾರ್ಯಕ್ರಮದಲ್ಲಿ ಅಂಕಣಕಾರರು, ರಮಣಶ್ರೀ ಹೋಟೆಲ್ ಸಮೂಹದ ಮುಖ್ಯಸ್ಥರಾದ ಎಸ್.ಷಡಕ್ಷರಿ ಮುಖ್ಯ ಅಭ್ಯಾಗತರಾಗಿ ಪಾಲ್ಗೊಳ್ಳಲಿದ್ದಾರೆ.

ಈ ಬಾರಿಯ ಸಂಗೀತೋತ್ಸವದಲ್ಲಿ ಪ್ರಶಸ್ತಿ ಪುರಸ್ಕೃತ ಪಂಡಿತ್ ವೆಂಕಟೇಶ್ ಕುಮಾರ್, ಪಂಡಿತ್ ವಿನಾಯಕ ತೊರವಿ ಅವರಿಂದ ಗಾಯನ, ವಿದುಷಿ ಅನುಪಮಾ ಭಾಗವತ್ ಅವರಿಂದ ಸಿತಾರ್, ಓಜಸ್ ಅಧಿಯ ಅವರಿಂದ ತಬಲಾ ವಾದನ ಹಾಗೂ ಅನಿರುದ್ಧ ಐತಾಳ್ ಅವರ ಗಾಯನ ಇರಲಿದೆ.

ಸಾಹವಾದನದಲ್ಲಿ ಪಂಡಿತ್ ರವೀಂದ್ರ ಯಾವಗಲ್, ಪಂಡಿತ್ ರವೀಂದ್ರ ಕಟೋಟಿ, ಪಂಡಿತ್ ವ್ಯಾಸಮೂರ್ತಿ ಕಟ್ಟಿ, ಪಂಡಿತ್ ರಾಜೇಂದ್ರ ನಾಕೋಡ್ ಹಾಗೂ ಸುಧಾಂಶು ಘರ್ಪುರೆ ಕಲಾವಿದರಿಗೆ ಸಾಥ್ ನೀಡಲಿದ್ದಾರೆ. ಕಾರ್ಯಕ್ರಮಕ್ಕೆ ಎಲ್ಲರಿಗೂ ಉಚಿತ ಪ್ರವೇಶವಿರಲಿದೆ.

***************

ಹಕ್ಕಿಜ್ವರ ಕಾಣಿಸಿಕೊಂಡಿರುವ ಜಿಲ್ಲೆಗಳಿಂದ ಕೋಳಿ ಮತ್ತು ಅದರ ಉತ್ಪನ್ನಗಳನ್ನು **ದಾವಣಗೆರೆ** ಜಿಲ್ಲೆಯ ಒಳಗೆ ಸಾಗಾಣಿಕೆ ಮಾಡದಂತೆ ತಡೆಯಲು ಚೆಕ್‌ಪೋಸ್ಟ್ ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ.

ಜಿಲ್ಲಾಡಳಿತ ಭವನದಲ್ಲಿ ಕೋಳಿ ಜ್ವರಕ್ಕೆ ಸಂಬಂಧಿಸಿದಂತೆ ಏರ್ಪಡಿಸಿದ್ದ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ನಂತರ ಆಕಾಶವಾಣಿಗೆಯೊಂದಿಗೆ ಮಾತನಾಡಿದ ಅವರು, ಬಳ್ಳಾರಿ ಜಿಲ್ಲೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿನ ಕುಕ್ಕುಟ ಸಂವರ್ಧನಾ ಕೇಂದ್ರದಲ್ಲಿ ಸಾಕಾಣಿಕೆ ಮಾಡಿದ ಕೋಳಿಗಳಿಗೆ ಕೋಳಿ ಜ್ವರದ ಲಕ್ಷಣ ಕಂಡುಬಂದು, ಕೆಲವು ಕೋಳಿಗಳು ಸಾವನ್ನಪ್ಪಿವೆ. ಸರ್ಕಾರ ಹಕ್ಕಿಜ್ವರ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ ಎಂದು ಹೇಳಿದ್ದಾರೆ.

**ಧ್ವನಿ: ಡಾ.ಜಿ.ಎಂ.ಗಂಗಾಧರ ಸ್ವಾಮಿ**

********ಮುಕ್ತಾಯ*******